**Akashvani: Bangalore**
**Regional News**
**06.09.2025 / 2.30 pm**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಆಲಮಟ್ಟಿ ಆಣೆಕಟ್ಟೆಯಲ್ಲಿ ಕೃಷ್ಣೆ ಜಲಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಾಗಿನ ಅರ್ಪಣೆ

೨. ಅಕ್ರಮ ಬೆಟ್ಟಿಂಗ್ ಹಗರಣ ; ರಾಜ್ಯದ ವಿವಿದೆಡೆ ಜಾರಿ ನಿರ್ದೇಶನಾಲಯ ದಾಳಿ

೩. ಶಾಸಕರಿಗೆ ಅನುದಾನ ಬಿಡುಗಡೆ ಮಾಡದ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ಆಗ್ರಹ

೪. ನಾಳೆ ಸಂಪೂರ್ಣ ಚಂದ್ರಗ್ರಹಣ; ಬರಿಗಣ್ಣಿನಿಂದ ವೀಕ್ಷಣೆ ಸಾಧ್ಯ- ಹಿರಿಯ ವಿಜ್ಞಾನಿ ಡಾ. ಬಿ.ಆರ್.ಗುರುಪ್ರಸಾದ್

><><><*><><><

ವಿಜಯಪುರದಲ್ಲಿಂದು ಕೃಷ್ಣೆಯ ಜಲಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಾಗಿನ ಅರ್ಪಿಸಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಉತ್ತರ ಕರ್ನಾಟಕದ ಜೀವನದಿ ಕೃಷ್ಣಾ ನದಿ ಮೈದುಂಬಿ ಹರಿಯುತ್ತಿದ್ದು, ಆಲಮಟ್ಟಿ ಜಲಾಶಯ ಸಂಪೂರ್ಣ ಭರ್ತಿಯಾಗಿದೆ. ಜಲಾಶಯದ ಒಳಹರಿವು ಸ್ಥಿರವಾಗಿ ಮುಂದುವರಿದಿದೆ. ಇದಕ್ಕೂ ಮೊದಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ರೈತರು ಹಾಗೂ ಸಾರ್ವಜನಿಕರು ಆಣೆಕಟ್ಟಿನ ಎತ್ತರವನ್ನು ಹೆಚ್ಚಿಸುವಂತೆ ಮನವಿ ಮಾಡಿದರು.

><><><*><><><

ಅಕ್ರಮ ಬೆಟ್ಟಿಂಗ್ ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಇಂದು ರಾಜ್ಯದ ಹಲವು ಸ್ಥಳಗಳಲ್ಲಿ ದಾಳಿ ನಡೆಸುತ್ತಿದೆ. ಕಾಂಗ್ರೆಸ್ ಶಾಸಕ ಕೆ.ಸಿ. ವೀರೇಂದ್ರ ನೀಡಿದ ಮಾಹಿತಿಯ ಆಧಾರದ ಮೇಲೆ ದಾಳಿ ನಡೆಸಲಾಗುತ್ತಿದೆ. ಚಳ್ಳಕೆರೆ ಪಟ್ಟಣದ ಸಹಕಾರಿ ಬ್ಯಾಂಕ್ ಮತ್ತು ಖಾಸಗಿ ರಾಷ್ಟ್ರೀಕೃತ ಬ್ಯಾಂಕಿನ ಘಟಕಗಳ ಮೇಲೆ ದಾಳಿ ನಡೆಸಲಾಗಿದೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ವೀರೇಂದ್ರ ಮತ್ತು ಅವರ ಪಾಲುದಾರರು ಕಡಿಮೆ ಅವಧಿಯಲ್ಲಿ ವೆಬ್‌ಸೈಟ್‌ಗಳಿಂದ ಒಂದೇ ಗೇಟ್‌ವೇ ಮೂಲಕ ೨ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಸಂಗ್ರಹಿಸಿದ್ದಾರೆ ಎಂದು ಇಡಿ ಬಹಿರಂಗಪಡಿಸಿದೆ. ಅಕ್ರಮ ಆನ್‌ಲೈನ್ ಬೆಟ್ಟಿಂಗ್‌ನಲ್ಲಿ ಸಾರ್ವಜನಿಕರನ್ನು ವಂಚಿಸಿದ ಪ್ರಕರಣಕ್ಕೆ

ಸಂಬಂಧಿಸಿದಂತೆ. ಬೆಂಗಳೂರು, ಚಳ್ಳಕೆರೆ, ಪಣಜಿ, ಗ್ಯಾಂಗ್‌ಟಾಕ್, ಜೋಧ್‌ಪುರ, ಹುಬ್ಬಳ್ಳಿ ಮತ್ತು ಮುಂಬೈ ಸೇರಿದಂತೆ ೩೧ ಸ್ಥಳಗಳಲ್ಲಿ ಶೋಧ ನಡೆಸಲಾಗಿದೆ ಎಂದು ಇಡಿ ತಿಳಿಸಿದೆ.

><><><*><><><

ರಾಜ್ಯ ಸರ್ಕಾರ ದಿವಾಳಿಯಾಗಿದ್ದು, ಶಾಸಕರ ಅನುದಾನ ಬಿಡುಗಡೆ ಮಾಡದ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವಂತೆ ಪ್ರತಿಪಕ್ಷ ನಾಯಕ ಆರ್. ಅಶೋಕ. ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತಂತೆ ಪ್ರತಿಕ್ರಿಯಿಸಿರುವ ಅವರು, ಹಿರಿಯ ಸಂಪುಟ ಸಚಿವರೊಬ್ಬರು ಎರಡು ಕೋಟಿ ರೂಪಾಯಿಗಳ ಅನುದಾನಕ್ಕೆ ಮನವಿ ಮಾಡಿರುವುದು ತಲೆ ತಗ್ಗಿಸುವ ವಿಚಾರ ಎಂದು ತಿಳಿಸಿದ್ದಾರೆ. ಆಡಳಿತ ಪಕ್ಷದ ಸದಸ್ಯರು ಸೇರಿದಂತೆ ಪ್ರತಿಪಕ್ಷಗಳ ಶಾಸಕರು ತಮ್ಮ ಕ್ಷೇತ್ರಗಳಲ್ಲಿ ತಲೆ ಎತ್ತಿಕೊಂಡು ಓಡಾಡಲು ಆಗುತ್ತಿಲ್ಲ ಎಂದು ದೂರಿದ್ದಾರೆ.

><><><*><><><

ನಾಳೆ ಸಂಪೂರ್ಣ ಚಂದ್ರಗ್ರಹಣ ಗೋಚರಿಸಲಿದೆ. ಬೆಂಗಳೂರಿನ ಜವಾಹರಲಾಲ್ ನೆಹರೂ ತಾರಾಲಯ ಸೇರಿ ವಿವಿದೆಡೆ ಗ್ರಹಣ ವೀಕ್ಷಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜವಾಹರ್‌ಲಾಲ್ ನೆಹರೂ ತಾರಾಲಯದ ನಿರ್ದೇಶಕ ಬಿ.ಆರ್.ಗುರುಪ್ರಸಾದ್ ತಿಳಿಸಿದ್ದಾರೆ.

ಅಪರೂಪದ ಈ ಘಟನೆಯನ್ನು ಬರಿಗಣ್ಣಿನಿಂದ ಸುಲಭವಾಗಿ ವೀಕ್ಷಿಸಬಹುದು. ಚಂದ್ರ ಮತ್ತು ಸೂರ್ಯನ ನಡುವೆ ಭೂಮಿ ಬಂದಾಗ ನಡೆಯುವ ಈ ನೆರಳಿನ ಆಟವನ್ನು ಎಲ್ಲರೂ ಕಣ್ತುಂಬಿಕೊಳ್ಳಬಹುದೆಂದು ಅವರು ತಿಳಿಸಿದ್ದಾರೆ. ನಾಳೆ ರಾತ್ರಿ ೯.೫೭ರಿಂದ ಗ್ರಹಣ ಪ್ರಕ್ರಿಯೆ ಆರಂಭವಾಗಲಿದೆ. ೧೧ ಗಂಟೆ ೧ ನಿಮಿಷದಿಂದ ೧೨.೩೩ರ ಅವಧಿಯಲ್ಲಿ ಸಂಪೂರ್ಣ ಚಂದ್ರಗ್ರಹಣ ಸಂಭವಿಸಲಿದೆ.

ಸೋಮವಾರ ಮುಂಜಾನೆ ೨.೨೫ಕ್ಕೆ ಗ್ರಹಣ ಅಂತ್ಯಗೊಳ್ಳಲಿದೆ.

><><><*><><><

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಜನಸಾಮಾನ್ಯರ ಮೇಲೆ ಹೊರೆಯಾಗುತ್ತಿದ್ದ ಜಿಎಸ್‌ಟಿ ಹೊರೆಯನ್ನು ಕಡಿಮೆ ಮಾಡಿರುವುದು ಸ್ವಾಗತಾರ್ಹ ಎಂದು ಕೋಲಾರ ಸಂಸದ ಎಂ.ಮಲ್ಲೇಶ್ ಬಾಬು ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಕ್ಯಾನ್ಸರ್ ಔಷಧಿಗಳು, ಕೃಷಿ ಉಪಕರಣಗಳು, ಆರೋಗ್ಯ, ವಿಮೆ, ಅಗತ್ಯ ವಸ್ತುಗಳು, ಹಾಲು, ಹಾಲಿನ ಉತ್ಪನ್ನಗಳು, ಆಹಾರ ಉತ್ಪನ್ನಗಳು ಸೇರಿದಂತೆ ಹಲವು ಉತ್ಪನ್ನಗಳ ಜಿಎಸ್ ಟಿ

ದರದಲ್ಲಿ ಭಾರಿ ಇಳಿಕೆ ಮಾಡಲಾಗಿದೆ. ಜಿಎಸ್ ಟಿ ಕಡಿಮೆ ಮಾಡಿರುವುದರಿಂದ ಬಡವರು, ಮಧ್ಯಮ ವರ್ಗ, ರೈತರಿಗೆ ತುಂಬಾ ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

ಧ್ವನಿ- ಎಂ.ಮಲ್ಲೇಶ್ ಬಾಬು, ಕೋಲಾರ ಸಂಸದ ( ೩೫ ಸೆಕೆಂಡುಗಳು)

><><><*><><><

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಜಿಎಸ್‌ಟಿ ದರದಲ್ಲಿ ಭಾರಿ ಇಳಿಕೆ ಮಾಡಿರುವುದು ಸ್ವಾಗತಾರ್ಹವಾಗಿದೆ. ಇದರಿಂದ ಬಡವರು, ಮಧ್ಯಮ ವರ್ಗದವರಿಗೆ ತುಂಬಾ ಅನುಕೂಲ ಉಂಟಾಗಲಿದೆ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷೆ ಹಾಗೂ ಕಾರವಾರ ಅಂಕೋಲಾ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕಿ ರೂಪಾಲಿ ನಾಯ್ಕ ತಿಳಿಸಿದ್ದಾರೆ. ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ಇದೊಂದು ಐತಿಹಾಸಿಕ ನಿರ್ಣಯ ಪ್ರಕಟಿಸಿದ್ದಾರೆ. ನಿರ್ಮಲಾ ಸೀತಾರಾಮನ್ ಅವರನ್ನು ಅಭಿನಂದಿಸುವುದಾಗಿ ರೂಪಾಲಿ ಎಸ್.ನಾಯ್ಕ ಪ್ರಕಟಣೆಯಲ್ಲಿ ಹೇಳಿದ್ದಾರೆ.

><><><*><><><

ಉತ್ತರಕನ್ನಡ ಜಿಲ್ಲೆಯಲ್ಲಿ ವ್ಯಾಪಕ ತಪಾಸಣೆಗಳನ್ನು ಕೈಗೊಳ್ಳುವ ಮೂಲಕ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪ್ರಕರಣಗಳು ಕಂಡು ಬರದಂತೆ ಎಚ್ಚರ ವಹಿಸುವಂತೆ ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರೀಯಾ ಸೂಚನೆ ನೀಡಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಜಿಲ್ಲಾ ಮಟ್ಟದ ಕಾರ್ಯಪಡೆ ಸಮಿತಿ ಸಭೆ ಹಾಗು ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು, ಮಾತನಾಡಿದರು. ಬಾಲ ಕಾರ್ಮಿಕರು ಹಾಗೂ ಕಿಶೋರ ಕಾರ್ಮಿಕ ಮಕ್ಕಳನ್ನು ಕೆಲಸದಲ್ಲಿ ತೊಡಗಿಸಿ ಕೊಳ್ಳುವುದು ಅಪರಾಧವಾಗಿದ್ದು, ಹೋಟೆಲ್, ಗ್ಯಾರೇಜ್, ಕಟ್ಟಡ ನಿರ್ಮಾಣ, ಬೇಕರಿಗಳಲ್ಲಿ ಹೆಚ್ಚಿನ ತಪಾಸಣೆಗಳನ್ನು ನಡೆಸಬೇಕು. ಇಂತಹ ಸ್ಥಳದಲ್ಲಿ ಮಕ್ಕಳು ಕೆಲಸದಲ್ಲಿ ತೊಡಗಿರುವುದು ಕಂಡು ಬಂದಲ್ಲಿ ಮಾಲೀಕರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಿದ್ದಾರೆ.

><><><*><><><

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಶಾರದಾ ಪೀಠದಲ್ಲಿ ಈ ತಿಂಗಳ ೨೨ ರಿಂದ ಅಕ್ಟೋಬರ್ ೩ರವರೆಗೆ ನವರಾತ್ರಿ ಉತ್ಸವ ನಡೆಯಲಿದೆ ಎಂದು ದೇವಾಲಯದ ಆಡಳಿತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ. ಪ್ರತಿ ನಿತ್ಯ ದೇವಾಲಯ ಹಾಗು ಶಾರದಾ ಪೀಠದಲ್ಲಿ ವಿಶೇಷ ಪೂಜೆ ನಡೆಯಲಿದ್ದು ಶ್ರೀ ಭಾರತಿತೀರ್ಥ ಸ್ವಾಮೀಜಿ, ವಿಧುಶೇಖರ ಸ್ವಾಮೀಜಿ ಈ ಉಭಯ ಶ್ರೀಗಳು ಪಾಲ್ಗೊಳ್ಳಲಿದಾರೆ. ನಿತ್ಯ ಸಂಜೆ ಧಾರ್ಮಿಕ ಹಾಗು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

><><><*><><><

ಕರಾವಳಿ ಹಾಗೂ ಉತ್ತರ ಒಳನಾಡಿನ ಹಲವೆಡೆ ಹಗುರವಾಗಿ ಸಾಧಾರಣ ಮಳೆಯಾಗಿದೆ. ಕೊಡಗಿನ ಭಾಗಮಂಡಲದಲ್ಲಿ ೩ ಸೆಂಟಿ ಮೀಟರ್, ಉಡುಪಿ ಕಾರವಾರದಲ್ಲಿ ೨ ಸೆಂಟಿ ಮೀಟರ್ ಮಳೆಯಾಗಿದೆ. ಕರಾವಳಿ ಜಿಲ್ಲೆಯ ಹಲವೆಡೆ ಇಂದಿನಿಂದ ಇನ್ನೆರಡು ದಿನಗಳ ಕಾಲ ಕೆಲವೆಡೆ ಹಗುರದಿಂದ ಸಾಧಾರಣವಾಗಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ನಿರ್ದೇಶಕ  ಸಿ.ಎಸ್.ಪಾಟೀಲ್ ಮಾಹಿತಿ ನೀಡಿದ್ದಾರೆ.

ಧ್ವನಿ : ಸಿ.ಎಸ್.ಪಾಟೀಲ್, ಹವಾಮಾನ ಇಲಾಖೆ ನಿರ್ದೇಶಕ (  ೩೫ ಸೆಕೆಂಡುಗಳು)

><><><*><><><

ಸೆಪ್ಟಂಬರ್ ೧೫ ರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಯಶಸ್ವಿಗೆ ಅಧಿಕಾರಿಗಳ ಜೊತೆಗೆ ಸಾರ್ವಜನಿಕರು ಕೈ ಜೋಡಿಸಬೇಕು  ಎಂದು ದಾವಣಗೆರೆ ಜಿಲ್ಲಾ ಹೆಚ್ಚುವರಿ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ ತಿಳಿಸಿದ್ದಾರೆ. ಕಾರ್ಯಕ್ರಮ ಕುರಿತ ಪೂರ್ವಭಾವಿ ಸಭೆಯಲ್ಲಿ ಅವರು, ಮಾತನಾಡಿದರು. ಸರ್ಕಾರದ ಎಲ್ಲ ಇಲಾಖೆಗಳ ಸಹಭಾಗಿತ್ವದಲ್ಲಿ ಸೆಪ್ಟಂಬರ್ ೧೫ ರಂದು ಜಿಲ್ಲಾಡಳಿತ ಭವನದಲ್ಲಿ ದಿನಾಚರಣೆ ಹಮ್ಮಿಕೊಳ್ಳಲಾಗಿದೆ, ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಮತದಾನದ ಹಕ್ಕಿನ ಮಹತ್ವದ ಬಗ್ಗೆ ಅರಿವು ಮೂಡಿಸುವ ಚಿತ್ರಕಲಾ, ಚರ್ಚಾ ಸ್ಪರ್ಧೆ ಹಾಗೂ ಛಾಯಾಚಿತ್ರ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಹೇಳಿದ್ದಾರೆ.

><><><*><><><